633 (963) ಶ್ರೀ ಶಿವಶಂಕರ್ ರೆಡ್ಡಿ ಎನ್ ಹೆಚ್ (ಗೌರಿಬಿದನೂರು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ಬಡರೋಗಿಗಳಿಗೆ ಎಲ್ಲಾ ತರಹದ ಕಾಯಿಲೆಗಳ ಚಿಕಿತ್ಸಾ ಸೌಲಭ್ಯ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಅಂತಹ ಸಂದರ್ಭಗಳಲ್ಲಿ ಅನಿವಾರ್ಯವಾಗಿ ಖಾಸಗೀ ನರ್ಸಿಂಗ್ ಹೋಮ್‌ಗಳಲ್ಲಿ ದಾಖಲೆಯಾದ ರೋಗಿಗಳಿಗೆ ಹೆಚ್ಚು ಶುಲ್ಕವನ್ನು ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಖಾಸಗೀ ನರ್ಸಿಂಗ್ ಹೋಮ್‌ಗಳು ಯಾವುದೇ ವಿದಿ ವಿಧಾನಗಳಿಲ್ಲದೇ ಕೇವಲ ಹಣ ಮಾಡುವ ಸಲುವಾಗಿ ನಡೆಸುತ್ತಿರುವುದು ನಿಜವಲ್ಲವೇ?

ಈ) ಹಾಗಿದ್ದಲ್ಲಿ, ಈ ನರ್ಸಿಂಗ್ ಹೋಮ್‌ಗಳಲ್ಲಿ ಬಡ ರೋಗಿಗಳಿಗೆ ಹೆಚ್ಚಿನ ರೀತಿಯಲ್ಲಿ ಚಿಕಿತ್ಸೆ ನೀಡಲು ಸರ್ಕಾರ ಕಾರ್ಯರೂಪವನ್ನು ರೂಪಿಸಲು ಸಾಧ್ಯವಿಲ್ಲವೇ?

ಉ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮವೇನು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಪ್ರಥಮ ಚಿಕಿತ್ಸಾ ಸೌಲಭ್ಯವನ್ನು ಗ್ರಾಮ ಮಟ್ಟದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಒದಗಿಸುತ್ತಿದ್ದು, ಹೆಚ್ಚಿನ ಹಾಗೂ ತಜ್ಞ ಚಿಕಿತ್ಸೆಗಳನ್ನು ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಆಸ್ಪತ್ರೆಗಳಲ್ಲಿ ಒದಗಿಸಲಾಗುತ್ತಿದೆ ಆದುದರಿಂದ ಎಲ್ಲಾ ತರಹದ ಕಾಯಿಲೆಗಳಿಗೆ ಸರ್ಕಾರದ ಆಸ್ಪತ್ರೆಗಳಲ್ಲಿ ಚಿಕಿತ್ಸಾ ಸೌಲಭ್ಯ ದೊರಕಿಸಿಕೊಡಲಾಗುತ್ತಿದೆ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಸಾಧ್ಯವಿದೆ

ಉ) ಇಂತಹ ವಿಧೇಯಕವನ್ನು ತರಲು ಯೋಜಿಸಲಾಗಿದೆ